# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ.**325/2021**

ಸಾಕ್ಷಿದಾರರ ಹೇಳಿಕೆಃ

**ಹೆಸರು** : ಉಮೇಶ ಹೆಚ್ ಆರ್ ಚಾಸಾಃ **1** ಪ್ರಾಸಾಃ **1**

**ತಂದೆಯ ಹೆಸರು** : ರುದ್ರಪ್ಪ

**ವಯಸ್ಸು** : **51** ವರ್ಷ

**ವೃತ್ತಿ** : ವ್ಯವಸಾಯ

**ವಾಸಸ್ಥಳ** : ಮಲೇಕುಂಬಳೂರು

ದಿನಾಂಕಃ **06-03-2026** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದ:-

ಆರೋಪಿ ಗೊತ್ತು. ಚಾಸಾ-2 ರಿಂದ 7 ಗೊತ್ತು. ಈಗ್ಗೆ 5 ವರ್ಷಗಳ ಹಿಂದೆ ನಾನು ಮತ್ತು ಚಾಸಾ-4 ರವರು ಮೋಟಾರ್ ಸೈಕಲ್ ನಲ್ಲಿ ಹೋಗುತ್ತಿದ್ದಾಗ ಅಪಘಾತವಾಗಿರುತ್ತದೆ. ಆದರೆ ಅಪಘಾತ ಹೇಗೆ ಮತ್ತು ಯಾರ ತಪ್ಪಿನಿಂದ ಆಯಿತು ಎಂಬ ವಿಚಾರ ನನಗೆ ಗೊತ್ತಿಲ್ಲ. ಪೊಲೀಸರಿಗೆ ಯಾವುದೇ ದೂರನ್ನು ಕೊಟ್ಟಿರುವುದಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಸ್ಥಳ ಮತ್ತು ಅಮಾನತ್ತು ಮಹಜರ್ ಕ್ರಮವನ್ನು ಜರುಗಿಸಿರುವುದಿಲ್ಲ. ಸಾಕ್ಷಿಯು 4 ಛಾಯಾಚಿತ್ರಗಳಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು ಆದರೆ ಯಾವ ವಿಚಾರಕ್ಕೆ ತೆಗೆದಿದ್ದಾರೆ ಎಂಬ ವಿಚಾರ ನನಗೆ ಗೊತ್ತಿಲ್ಲ. ಈಗೇ ಸುಮಾರು 5 ವರ್ಷಗಳ ಹಿಂದೆ ಪೊಲೀಸರ ಕೋರಿಕೆಯ ಮೇರೆಗೆ 4 ದಾಖಲೆಗಳಿಗೆ ಸಹಿಯನ್ನು ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

ದೂರನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು, ಸ್ಥಳ ಮಹಜರ್ ಅನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು, ಕಚ್ಚ ನಕಾಶೆಯನ್ನು ನಿಪಿ-3 ಎಂದು,

ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು, 2 ಛಾಯಾಚಿತ್ರಗಳನ್ನು ನಿಪಿ-4 ಮತ್ತು 5 ಎಂದು, ಅಮಾನತ್ತು ಮಹಜರ್ ಅನ್ನು ನಿಪಿ-6 ಎಂದು, ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು, 2 ಛಾಯಾಚಿತ್ರಗಳನ್ನು ನಿಪಿ-7 ಮತ್ತು 8 ಎಂದು, ಸಿ ಡಿ ಯನ್ನು ನಿಪಿ-9 ಎಂದು ಗುರುತಿಸಲಾಯಿತು.

ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.

ಪಾಟೀ ಸವಾಲು :- ಮಾನ್ಯ ಸ.ಸ.ಅ. ರವರಿಂದ:-

ದಿಃ 29-12-2020 ರಂದು ಮದ್ಯಾಹ್ಞ 02-30 ಗಂಟೆ ಸಮಯದಲ್ಲಿ ನಾನು ಮತ್ತು ಚಾಸಾ-4 ರವರಿಗೆ ಸೇರಿದ ಮೋಟಾರ್ ಸೈಕಲ್ ನಂ.ಕೆಎ-17/ಹೆಚ್ ಬಿ-9641 ಮೋಟಾರ್ ಸೈಕಲ್ ನಲ್ಲಿ ಕುಂದೂರು ಬಸವಪಟ್ಟಣ ರಸ್ತೆಯಲ್ಲಿ ಹೋಗುತ್ತಿದ್ದಾಗ ಆರೋಪಿಯು ಕೆಎ-17/ಡಿ-6320 ಗೂಡ್ಸ್ ಆಟೋವನ್ನು ಅತೀ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಹಿಂದಿನಿಂದ ನಮ್ಮ ಬೈಕ್ ಗೆ ಡಿಕ್ಕಿ ಪಡಿಸಿದ ಪರಿಣಾಮ ನನಗೆ ಮಂಡಿಯ ಹತ್ತಿರ ತೀವ್ರ ಸ್ವರೂಪದ ಮತ್ತು ಚಾಸಾ-4 ರವರಿಗೆ ಸಣ್ಣಪುಟ್ಟ ಗಾಯಗಳಾಗಿರುತ್ತವೆ ಎಂದು ಪೊಲೀಸರಿಗೆ ನಿಪಿ-1 ರಂತೆ ದೂರನ್ನು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ.

ದಿಃ 07-01-2021 ರಂದು ಬೆಳಗ್ಗೆ 11-00 ರಿಂದ 12-00 ಗಂಟೆ ಸಮಯದಲ್ಲಿ ನಾನು ಸ್ಥಳ ತೋರಿಸಿದ ಮೇರೆಗೆ ಚಾಸಾ-2 ಮತ್ತು 3 ರವರ ಸಮಕ್ಷಮ ನಿಪಿ-2 ರಂತೆ ಸ್ಥಳ ಮಹಜರ್ ಕ್ರಮ ಜರುಗಿಸಿ, ನಿಪಿ-3 ರಂತೆ ಕಚ್ಚ ನಕಾಶೆಯನ್ನು ತಯಾರಿಸಿ, ನಿಪಿ-4 ಮತ್ತು 5 ರಂತೆ ಛಾಯಾಚಿತ್ರಗಳನ್ನು ತೆಗೆದಿದ್ದಾರೆ ಎಂದರೆ ಸರಿಯಲ್ಲ.

ಅದೇ ದಿನ ಮದ್ಯಾಹ್ಞ 01-00 ರಿಂದ 02-00 ಗಂಟೆ ಸಮಯದವರೆಗೆ ನನ್ನ ಮತ್ತು ಚಾಸಾ-2 ಮತ್ತು 3 ರವರ ಸಮಕ್ಷಮ ಅಪಘಾತಕ್ಕೀಡಾದ ಕೆಎ-17/ಹೆಚ್ ಬಿ-9641 ಮೋಟಾರ್ ಸೈಕಲ್ ಮತ್ತು ಕೆಎ-17/ಡಿ-6320 ಗೂಡ್ಸ್ ಆಟೋವನ್ನು ಅಮಾನತ್ತು ಪಡಿಸಿಕೊಂಡು ನಿಪಿ-6 ರಂತೆ ಮಹಜರ್ ಕ್ರಮ ಜರುಗಿಸಿ, ನಿಪಿ-7 ಮತ್ತು 8 ರಂತೆ ಛಾಯಾಚಿತ್ರಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಈಗ ಆರೋಪಿಯೊಂದಿಗೆ ರಾಜಿ ಮಾಡಿಕೊಂಡಿರುತ್ತೇವೆ ಆ ಕಾರಣದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು :- ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.